ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	895
2)	ಮಾನ್ಯ ಸದಸ್ಯರ ಹೆಸರು	ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	20/09/2021
4)	ಉತ್ತರಿಸುವವರು	ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು.

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಕಿರಿಯ ತರಬೇತಿ ಅಧಿಕಾರಿ ಹುದ್ದೆಯಿಂದ ತರಬೇತಿ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯು ಇಲಾಖೆಯಲ್ಲಿ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಯಾವಾಗ ಪ್ರಾರಂಭವಾಯಿತು; ಪ್ರಕ್ರಿಯೆ ಯಾವ ಹಂತದಲ್ಲಿದೆ;	ಹೌದು. ಇಲಾಖೆಯಲ್ಲಿ ಮುಂಬಡ್ತಿ ನೀಡುವ ಪ್ರಕ್ರಿಯೆಯು ದಿನಾಂಕ: 20/06/2020ರಿಂದ ಪ್ರಾರಂಭವಾಗಿರುತ್ತದೆ. ಇಲಾಖೆಯ ತರಬೇತಿ ವಿಭಾಗದಲ್ಲಿ ಕಿರಿಯ ತರಬೇತಿ ಅಧಿಕಾರಿ ಹುದ್ದೆಯಿಂದ ತರಬೇತಿ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ದಿನಾಂಕ: 15/10/2020ರಂದು ಇಲಾಖಾ ಮುಂಬಡ್ತಿ ಸಮಿತಿಯ ಸಭೆಯನ್ನು ನಡೆಸಲಾಗಿತ್ತು. ಖಾಲಿ ಇರುವ ತರಬೇತಿ ಅಧಿಕಾರಿ ಹುದ್ದೆಗಳಿಗೆ ಕಿರಿಯ ತರಬೇತಿ ಅಧಿಕಾರಿ ವೃಂದದಿಂದ ಮುಂಬಡ್ತಿ ನೀಡುವ ಸಂಬಂಧ ದಿನಾಂಕ: 13/11/2020ರಂದು ಸ್ಥಳ ಆಯ್ಕೆಗಾಗಿ ಸಮಾಲೋಚನೆಯನ್ನು ಆಯುಕ್ತಾಲಯದ ಹಂತದಲ್ಲಿ ಏರ್ಪಡಿಸಲಾಗಿತ್ತು. ತದನಂತರ ತರಬೇತಿ ಅಧಿಕಾರಿ ಹುದ್ದೆಗೆ ಮುಂಬಡ್ತಿ ನೀಡಿರುವುದರಲ್ಲಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಪರಿಗಣಿಸದೇ ಇರುವುದರಿಂದ ಮುಂಬಡ್ತಿ ಪ್ರಕ್ರಿಯೆಯನ್ನು ತಡೆಹಿಡಿಯುವಂತೆ ದೂರು ಸ್ವೀಕೃತವಾದ ಹಿನ್ನೆಲೆಯಲ್ಲಿ ಆಯುಕ್ತಾಲಯದ ಹಂತದಲ್ಲಿ ಸಿದ್ಧಪಡಿಸಿರುವ ಇಲಾಖಾ ಮುಂಬಡ್ತಿ ಸಭೆಯ ನಡವಳಿಯಂತೆ ಕ್ರಮ ಕೈಗೊಳ್ಳಲು ಅಥವಾ ಬ್ಯಾಕ್‌ಲಾಗ್ ಹುದ್ದೆಗಳನ್ನು ನಿರ್ವಹಿಸಿರುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆ ನಡೆಸಿ ಮಾರ್ಗದರ್ಶನ ನೀಡುವಂತೆ ಆಯುಕ್ತರು ಕೋರಿರುತ್ತಾರೆ. ಸದರಿ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.
ಆ)	ಮುಂಬಡ್ತಿ ನೀಡಲು ವಿಳಂಬವಾಗುತ್ತಿರಲು ಕಾರಣಗಳೇನು; (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)	ಸೂಪರ್‌ನ್ಯೂಮರರಿ ಹುದ್ದೆಗಳನ್ನು ಪರಿಗಣಿಸಿ ಹಿಂದಿನ ಎಲ್ಲಾ ಮುಂಬಡ್ತಿಗಳನ್ನು ಪುನರ್ ಪರಿಶೀಲಿಸುವಂತೆ ಮನವಿ / ದೂರುಗಳು ಸ್ವೀಕೃತವಾಗುತ್ತಿರುವುದರಿಂದ ಮುಂಬಡ್ತಿ ನೀಡುವ ಪ್ರಕರಣದಲ್ಲಿ ಕ್ರಮವಹಿಸಲು ವಿಳಂಬವಾಗಿರುತ್ತದೆ.
ಇ)	ಯಾವ - ಕಾಲಮಿತಿಯೊಳಗೆ ಮುಂಬಡ್ತಿ ಪ್ರಕ್ರಿಯೆ ಮುಗಿಸಲಾಗುವುದು?	ಆದಷ್ಟು ಶೀಘ್ರವಾಗಿ ಮುಂಬಡ್ತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ಕೌಉಜೀಇ 55 ಕೈತಪ್ರ 2021

(ಡಾ.ಸಿ.ಎನ್.ಅಶ್ವಥ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಸಚಿವರು.